ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 601
2) ಸದಸ್ಯರ ಹೆಸರು : ಶ್ರೀ ಬಿ.ಎಂ.ಎಲ್.ಕಾಂತರಾಜು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3) ಉತ್ತರಿಸುವ ದಿನಾಂಕ : 19.02.2018
4) ಉತ್ತರಿಸುವ ಸಚಿವರು : ಮಾನ್ಯ ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

	ಪ್ರಶ್ನೆ	ಉತ್ತರ
(ಅ)	ಯೋಜನಾ ಮತ್ತು ಸಾಂಖ್ಯಿಕ ಇಲಾಖೆ ವ್ಯಾಪ್ತಿಗೆ ಬರುವ ಕೆಲವು ನಿಗಮ/ಮಂಡಳಿಗಳಲ್ಲಿ ಅನುದಾನ ಹಂಚಿಕೆ ಮಾಡುವಾಗ ವಿಧಾನ ಪರಿಷತ್ ಸದಸ್ಯರಿಗೆ ಅನುದಾನ ಹಂಚಿಕೆಯಲ್ಲಿ ತಾರತಮ್ಯ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಹೈದ್ರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ಅನುದಾನವನ್ನು ಡಾ॥ ಡಿ.ಎಂ.ನಂಜುಂಡಪ್ಪ ರವರ ಉನ್ನತಾಧಿಕಾರ ಸಮಿತಿಯ ಶಿಫಾರಸ್ಸಿನ ಅನ್ವಯ ಸಿ.ಡಿ.ಐ. ಆಧಾರದ ಮೇರೆಗೆ ತಾಲ್ಲೂಕನ್ನು ಒಂದು ಘಟಕವೆಂದು ಪರಿಗಣಿಸಿ ಅನುದಾನವನ್ನು ಹಂಚಿಕೆ ಮಾಡಲಾಗುತ್ತಿದೆ. ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ ಹಾಗೂ ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ-ಈ ಮಂಡಳಿಗಳ ಸರ್ವ ಸದಸ್ಯರ ಸಭೆಯ ನಿರ್ಣಯದಂತೆ ತಾಲ್ಲೂಕುವಾರು ಅನುದಾನ ಹಂಚಿಕೆ ಮಾಡಲಾಗುತ್ತಿದೆ.
(ಆ)	ಬಂದಿದ್ದಲ್ಲಿ, ಈ ತಾರತಮ್ಯ ನಿವಾರಣೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು:(ವಿವರ ನೀಡುವುದು)	ಅನ್ವಯಿಸುವುದಿಲ್ಲ
(ಇ)	ಅದೇ ರೀತಿಯಾಗಿ ಬಯಲುಸೀಮೆ ಮಂಡಳಿ, ಅನುದಾನ ಹಂಚಿಕೆ ಮಾಡುವಾಗ ವಿಧಾನ ಸಭೆಯ ಸದಸ್ಯರಿಗೆ ಹಂಚಿಕೆ ಮಾಡಿದ ಅನುದಾನದಂತೆ, ವಿಧಾನ ಪರಿಷತ್ ಸದಸ್ಯರಿಗೆ ಅನುದಾನ ಹಂಚಿಕೆ ಮಾಡಿ ಈ ವ್ಯತ್ಯಾಸವನ್ನು ಸರಿಪಡಿಸಲು ಸರ್ಕಾರ ಕೂಡಲೇ ಕ್ರಮ ವಹಿಸುವುದೇ:(ವಿವರ ನೀಡುವುದು)	ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಸರ್ವ ಸದಸ್ಯರ ಸಭೆಯ ನಿರ್ಣಯದಂತೆ ತಾಲ್ಲೂಕುವಾರು ಅನುದಾನ ಹಂಚಿಕೆ ಮಾಡಲಾಗುತ್ತಿದೆ.
(ಈ)	ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಆಯ್ಕೆ ಹೊಂದಿದ ವಿಧಾನ ಪರಿಷತ್ ಸದಸ್ಯರು ಒಂದು ಜಿಲ್ಲೆಗೆ ಅಥವಾ 2 ಜಿಲ್ಲೆಗೆ ಒಬ್ಬರಂತೆ ಆಯ್ಕೆ ಆಗುವುದರಿಂದ ಇವರ ಕ್ಷೇತ್ರ 10-15 ವಿಧಾನ ಸಭೆಯ ಕ್ಷೇತ್ರಗಳನ್ನು ಒಳಗೊಂಡಿರುವಂತೆ ಇರುವುದರಿಂದ ಈ ಕ್ಷೇತ್ರದಿಂದ ಆಯ್ಕೆ ಹೊಂದಿದ ಪರಿಷತ್ ಸದಸ್ಯರಿಗೆ ಎಲ್ಲಾ ನಿಗಮ/ಮಂಡಳಿ/ಕ್ಷೇತ್ರಾಭಿವೃದ್ಧಿ ಅನುದಾನವನ್ನು ಹೆಚ್ಚಿಸಲು ಸರ್ಕಾರ ಕ್ರಮ ವಹಿಸುವುದೇ: (ವಿವರ ನೀಡುವುದು)	ಉದ್ಭವಿಸುವುದಿಲ್ಲ

ಸಂಖ್ಯೆ:ಯೋಇ 08 ಪಿಟಿಪಿ 2018

(ಎಂ.ಆರ್.ಸೀತಾರಾಂ)
ಯೋಜನೆ, ಸಾಂಖ್ಯಿಕ,
ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು